**ಕರ್ನಾಟಕ ವಿಧಾನ ಪರಿಷತ್ತು**

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 757 |
| 2 | ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 13–03–2025 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2015, ಜನವರಿ 9ರ ಬಳಿಕ ಬೆಂಗಳೂರು ನಗರ ಜಿಲ್ಲೆಯ ‘ನೀಲಸಂದ್ರ ಗ್ರಾಮದ ಸರ್ವೇ ನಂ.79 ರಲ್ಲಿ 15 ಎಕರೆ 12 ಗುಂಟೆ ಜಮೀನಿನಲ್ಲಿ ಮನೆ ಕಟ್ಟಲು ಅನುಮತಿ ನೀಡಿದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವಂತೆ ಕೋರಿ ಬಿ.ಬಿ.ಎಂ.ಪಿ ಆಯುಕ್ತರಿಗೆ ಮುಜರಾಯಿ ಆಯುಕ್ತರು ಪತ್ರ ಬರೆದಿರುತ್ತಾರೆಯೇ; (ವಿವರ ನೀಡುವುದು)</td><td>ಸಹಾಯಕ ಕಾರ್ಯಪಾಲಕ ಅಭಿಯಂತರರು, ಶಾಂತಿನಗರ ಉಪ ವಿಭಾಗ ವ್ಯಾಪ್ತಿಯ ವಾರ್ಡ್ ಸಂಖ್ಯೆ: 168 ನೀಲಸಂದ್ರ ಗ್ರಾಮದ ಸರ್ವೆ ನಂ–79 ರಲ್ಲಿ 15 ಎಕರೆ 12 ಗುಂಟೆ ಜಮೀನಿನಲ್ಲಿ ಮನೆ ಕಟ್ಟಲು ಪಾಲಿಕೆ ವತಿಯಿಂದ ಯಾವುದೇ ಅನುಮತಿ ನೀಡಿರುವುದು ಕಂಡು ಬಂದಿರುವುದಿಲ್ಲ ಹಾಗೂ ಸದರಿ ಜಾಗಕ್ಕೆ ಸಂಬಂಧಿಸಿದಂತೆ ಯಾವುದೇ ಪತ್ರ ವ್ಯವಹಾರ ಮಾಡಿರುವುದಿಲ್ಲ.</td></tr>
<tr><td>ಆ)</td><td>ಸದರಿ ಜಮೀನಿನಲ್ಲಿ ಅಕ್ರಮವಾಗಿ ನಿರ್ಮಿಸಿರುವ ಕಟ್ಟಡಗಳಿಗೆ ನೀರಿನ ಸಂಪರ್ಕ ಹಾಗೂ ಒಳಚರಂಡಿ ವ್ಯವಸ್ಥೆಯನ್ನು ನೀಡಿದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳದಿರಲು ಕಾರಣವೇನು; (ವಿವರ ನೀಡುವುದು)</td><td rowspan="2">• ಮೂಲಭೂತ ಸೌಕರ್ಯಗಳಲ್ಲಿ ಒಂದಾದ ನೀರು ಮತ್ತು ಒಳಚರಂಡಿ ಸಂಪರ್ಕವನ್ನು ಅನಧಿಕೃತವಾಗಿ ಬಳಕೆ ಮಾಡುತ್ತಿದ್ದ ಬಳಕೆದಾರರ ಕನಿಷ್ಠ ದಾಖಲಾತಿಗಳನ್ನು ಪಡೆದುಕೊಂಡು ಸದರಿ ನಿವಾಸಿಗಳಿಗೆ ತೊಂದರೆ ಆಗಬಾರದು ಎಂಬ ಕಾರಣಕ್ಕಾಗಿ ಪರಿಸರ ಸ್ನೇಹಿ, ಮಾನವೀಯತೆ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ತಾತ್ಕಾಲಿಕ ನೀರು ಮತ್ತು ಒಳಚರಂಡಿ ಸಂಪರ್ಕವನ್ನು ಜಲಮಂಡಳಿ ವತಿಯಿಂದ ಮಂಜೂರಾತಿ ಮಾಡಲಾಗಿರುತ್ತದೆ.<br>• ಈ ಹಿನ್ನೆಲೆಯಲ್ಲಿ, ಅಧಿಕಾರಿಗಳ ಮೇಲೆ ಕ್ರಮವಹಿಸುವ ಪ್ರಮೇಯ ಉದ್ಭವಿಸುವುದಿಲ್ಲ.</td></tr>
<tr><td>ಇ)</td><td>ಅಧಿಕಾರಿಗಳ ಮೇಲೆ ಅಗತ್ಯ ಇಲಾಖಾ ಕ್ರಮ ಕೈಗೊಳ್ಳುವಂತೆ ಇಲ್ಲವಾದಲ್ಲಿ ಅಂತಹಾ ಅಧಿಕಾರಿಗಳ ಅಮಾನತ್ತು ಮಾಡಿ ಕ್ರಮ ಕೈಗೊಳ್ಳದಿರಲು ಕಾರಣವೇನು? (ವಿವರ ನೀಡುವುದು)</td></tr>
</table>

**ಸಂಖ್ಯೆ: ನಅಇ 96 ಎಂಎನ್‌ಯು 2025**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ